# Press Release on Prime Minister’s meeting with President of France

May 04, 2022

## ಫ್ರಾನ್ಸ್ ಅಧ್ಯಕ್ಷರ ಜೊತೆ ಪ್ರಧಾನಮಂತ್ರಿ ನಡೆಸಿದ ಸಭೆಯ ಪತ್ರಿಕಾ ಪ್ರಕಟಣೆ

1. ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಕೋಪನ್ ಹೇಗನ್ ನಲ್ಲಿ 2ನೇ ಭಾರತ- ನಾರ್ಡಿಕ್ ಶೃಂಗಸಭೆಯಲ್ಲಿ ಭಾಗವಹಿಸಿ ವಾಪಸ್ಸಾಗುವಾಗ 2022ರ ಮೇ 4ರಂದು ಫ್ರಾನ್ಸ್ ಗೆ ಅಧಿಕೃತ ಭೇಟಿ ನೀಡಿದ್ದರು.

2. ಪ್ಯಾರೀಸ್ ನಲ್ಲಿ ಅವರು ಫ್ರಾನ್ಸ್ ನ ಘನತೆವೆತ್ತ ಅಧ್ಯಕ್ಷ ಶ್ರೀ ಎಮ್ಯಾನುಯಲ್ ಮಾಕ್ರಾನ್ ಅವರೊಂದಿಗೆ ಮುಖಾಮುಖಿ ಮತ್ತು ನಿಯೋಗ ಮಟ್ಟದ ಮಾತುಕತೆ ನಡೆಸಿದರು. ಉಭಯ ನಾಯಕರು ರಕ್ಷಣಾ, ಸಹಕಾರ, ನೀಲಿ ಆರ್ಥಿಕತೆ, ನಾಗರಿಕ ಪರಮಾಣು ಮತ್ತು ಜನರ-ಜನರ ನಡುವಿನ ಸಂಬಂಧಗಳು ಸೇರಿದಂತೆ ವಿಸ್ತೃತ ವಲಯದ ಹಲವು ದ್ವಿಪಕ್ಷೀಯ ವಿಷಯಗಳ ಬಗ್ಗೆ ಸಮಾಲೋಚನೆಗಳನ್ನು ನಡೆಸಿದರು.

3. ಉಭಯ ನಾಯಕರು ಪ್ರಾದೇಶಿಕ ಮತ್ತು ಜಾಗತಿಕ ಭದ್ರತಾ ಸ್ಥಿತಿಗತಿಯನ್ನು ಪರಾಮರ್ಶಿಸಿದರು ಮತ್ತು ಭಾರತ-ಫ್ರಾನ್ಸ್ ಕಾರ್ಯತಂತ್ರದ ಪಾಲುದಾರಿಕೆಯನ್ನು ಜಾಗತಿಕ ಒಳಿತಿಗಾಗಿ ಒಂದು ಶಕ್ತಿಯನ್ನಾಗಿ ರೂಪಿಸುವಲ್ಲಿ ಒಗ್ಗೂಡಿ ಕಾರ್ಯನಿರ್ವಹಿಸುವ ಮಾರ್ಗೋಪಾಯಗಳ ಬಗ್ಗೆ ಚರ್ಚಿಸಿದರು. ಪ್ರಧಾನಿ ಅವರ ಫ್ರಾನ್ಸ್ ಭೇಟಿಯು ಉಭಯ ದೇಶಗಳ ನಡುವೆ ಮಾತ್ರವಲ್ಲದೆ ಉಭಯ ನಾಯಕರ ನಡುವಿನ ಗಟ್ಟಿಯಾದ ಸ್ನೇಹ ಮತ್ತು ಸೌಹಾರ್ದತೆಯನ್ನು ಬಿಂಬಿಸಿತು.

4. ಆದಷ್ಟು ಶೀಘ್ರ ಭಾರತಕ್ಕೆ ಭೇಟಿ ನೀಡುವಂತೆ ಪ್ರಧಾನಮಂತ್ರಿ ಅವರು ಅಧ್ಯಕ್ಷ ಮಾಕ್ರಾನ್ ಅವರಿಗೆ ಆಹ್ವಾನ ನೀಡಿದರು.

5. ಮಾತುಕತೆಯ ನಂತರ ಜಂಟಿ ಹೇಳಿಕೆ ಬಿಡುಗಡೆ ಮಾಡಲಾಗಿದೆ. ಅದನ್ನು ಇಲ್ಲಿ ಪಡೆಯಬಹುದಾಗಿದೆ. ಅದರ ಲಿಂಕ್ ಇಲ್ಲಿದೆ, ಅದರ ಲಿಂಕ್ ಇಲ್ಲಿದೆ.

ಪ್ಯಾರಿಸ್

ಮೇ 04, 2022

DISCLAIMER: This is an approximate translation. The original is available in English on MEA’s website and may be referred to as the official press release.